ಜೀವಾವಧಿ ಶಿಕ್ಷೆಗೆ ಸಂಬಂಧಿಸಿದಂತೆ ಕಾನೂನು ತಿದ್ದುಪಡಿ

704 - ಶ್ರೀ ಕೆ.ಎಸ್. ಪುಟ್ಟಣ್ಣಯ್ಯ (ಪಾಂಡವಪುರ) : ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 9ನೇ ಪಿಧಾನ ಸಭೆಯಲ್ಲಿ ಜೀವಾವಧಿ ಶಿಕ್ಷೆಯನ್ನು ಪಕ್ಕದ ರಾಜ್ಯಗಳಂತೆ 14 ವರ್ಷಗಳಿಂದ 10 ವರ್ಷಗಳಿಗೆ ಇಳಿಸುವಂತೆ ಸಂಬಂಧಪಟ್ಟ ಕಾನೂನನ್ನು ತಿದ್ದುಪಡಿ ಮಾಡಲಾಗಿದೆಯೇ;

ಆ) ಹಾಗಿದ್ದಲ್ಲಿ ಇಮವರೆವಿಗೂ ಜಾರಿಗೆ ತರದಿರಲು ಕಾರಣಗಳೇನು, ಎಂದಿನಿಂದ ಜಾರಿಗೆ ತರಲಾಗುವುದು?

ಶ್ರೀ ಪಿ.ಜಿ.ಆರ್. ಸಿಂಧ್ಯಾ (ಗೃಹ ಸಚಿವರು) :

ಅ) ಇಲ್ಲ.

ಆ) ಜೀವಾವಧಿ ಶಿಕ್ಷೆಯನ್ನು 14 ವರ್ಷಗಳಿಂದ 10 ವರ್ಷಗಳಿಗೆ ಇಳಿಸಲು ಕರ್ನಾಟಕ ರಾಜ್ಯ ಸರ್ಕಾರದಿಂದ ಪ್ರಸ್ತಾಪಿಸಿದ ದಂಡ ಪ್ರಕ್ರಿಯೆ ಸಂಹಿತೆ (ಕರ್ನಾಟಕ ತಿದ್ದುಪಡಿ) ವಿಧೇಯಕ 1992ಕ್ಕೆ ಕೇಂದ್ರ ಸರ್ಕಾರ ಅನುಮತಿ ನೀಡದೇ ಇರುವುದರಿಂದ ಸದರಿ ವಿಧೇಯಕವನ್ನು ಹಿಂದಕ್ಕೆ ಪಡೆಯಲಾಗಿದೆ.

ವಾಣಿಜ್ಯ ತೆರಿಗೆ ಇಲಾಖೆಯ 'ಸಿ' ಮತ್ತು 'ಡಿ' ವರ್ಗಗಳ ನೌಕರರ ಬೇಡಿಕೆ ಕುರಿತು

707 - ಶ್ರೀ ರಾಮಲಿಂಗರೆಡ್ಡಿ (ಜಯನಗರ) : ಮಾನ್ಯ ಹಣಕಾಸು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಾಣಿಜ್ಯ ತೆರಿಗೆ ಇಲಾಖೆಯಲ್ಲಿ ಕೆಲಸ ಮಾಡುತ್ತಿರುವ 'ಸಿ' ಮತ್ತು 'ಡಿ' ವರ್ಗದ ನೌಕರರ ಸಂಖ್ಯೆ ಎಷ್ಟು;

ಆ) ಈ ಇಲಾಖೆಯಲ್ಲಿ ವಿನಗೂಲಿ ಆಧಾರದ ಮೇಲೆ ಕೆಲಸ ಮಾಡುತ್ತಿರುವ ನೌಕರರ ಸಂಖ್ಯೆ ಎಷ್ಟು;

ಇ) ಈ ವಿನಗೂಲಿ ನೌಕರರನ್ನು ಸಕ್ರಮಗೊಳಿಸುವುದು 'ಡಿ' ದರ್ಜೆ ನೌಕರರಿಗೆ ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳಿಗೆ ಬಡ್ತಿ ನೀಡಬೇಕೆಂಬ ಬೇಡಿಕೆ ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ ಈ ಬೇಡಿಕೆಗಳ ಬಗ್ಗೆ ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಸಿದ್ದರಾಮಯ್ಯ (ಹಣಕಾಸು ಮತ್ತು ಯೋಜನಾ ಸಚಿವರು) :

ಅ) 'ಸಿ' ದರ್ಜೆ : 4756

'ಡಿ' ದರ್ಜೆ : 1346

ಒಟ್ಟು : **6102**

ಅ) ಶೀಘ್ರಲಿಪಿಗಾರರು : 21

ಬೆರಳಚ್ಚುಗಾರರು : 152

ದ್ವಿತೀಯ ದರ್ಜೆ ಸಹಾಯಕರು : 206

ಇ) ಹೌದು.

ಈ)

1. ದಿನಗೂಲಿ ನೌಕರರಲ್ಲಿ 1.7.1984ರ ನಂತರ ನೇಮಕಗೊಂಡವರನ್ನು ಸಕ್ರಮಗೊಳಿಸುವ ವಿಷಯ ನ್ಯಾಯಾಲಯಗಳ ಮುಂದಿದೆ.
2. 'ಡಿ' ದರ್ಜೆ ನೌಕರರಿಗೆ ಇಲಾಖಾ ವ್ಯಂದ ಮತ್ತು ನೇಮಕಾತಿ ನಿಯಮಗಳಲ್ಲಿ ಬಡ್ತಿ ಅವಕಾಶ ಕಲ್ಪಿಸಲಾಗಿದೆ.

ಬೆಂಗಳೂರು ಅಲಸೂರು ಕೆರೆಯನ್ನು ಮಹಾನಗರ ಪಾಲಿಕೆ ವಹಿಸಿಕೊಳ್ಳುವ ಬಗ್ಗೆ

708 - ಶ್ರೀ ರಾಮಲಿಂಗರೆಡ್ಡಿ (ಜಯನಗರ): ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ವಕ್ಫ್ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ಅಲಸೂರು ಕೆರೆಯ ನೀರು ಕಲುಷಿತಗೊಂಡಿದ್ದು ಸುತ್ತಮುತ್ತಲಿನ ಜಾಗಗಳ ವಾತಾವರಣಕ್ಕೆ ಧಕ್ಕೆ ಬಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ಕೆರೆಗೆ ಸುತ್ತಮುತ್ತಲಿನ ಚರಂಡಿ ನೀರು ಹಾಗೂ ಮಳೆ ನೀರು ಹರಿದು ಬರುತ್ತಿರುವುದು ನಿಜವಲ್ಲವೇ?

ಇ) ಈ ಕೆರೆಯು ಈಗ ಯಾವ ಸ್ವಾಧೀನದಲ್ಲಿದೆ?

ಈ) ಈ ಕೆರೆಯನ್ನು ಶುದ್ಧೀಕರಣಗೊಳಿಸಿ ಇದನ್ನು ಪ್ರವಾಸಿ ಆಕರ್ಷಕ ಸ್ಥಳವನ್ನಾಗಿ ಪರಿವರ್ತಿಸಲು ಬೆಂಗಳೂರು ಮಹಾನಗರ ಪಾಲಿಕೆಯ ವಶಕ್ಕೆ ಪಡೆದುಕೊಳ್ಳಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೇ?

ಶ್ರೀ ಆರ್. ರೋಷನ್ ಬೇಗ್ (ಬೆಂಗಳೂರು ಅಭಿವೃದ್ಧಿ ಮತ್ತು ವಕ್ಫ್‌ರಾಜ್ಯ ಸಚಿವರು) :

ಅ) ಬಂದಿದೆ.

ಆ) ಹೌದು.

ಇ) ಅಲಸೂರು ಕೆರೆಯು ನಗರಪಾಲಿಕೆ ಸ್ವಾಧೀನದಲ್ಲಿರುತ್ತದೆ. ಇದರಲ್ಲಿ ಭಾಗಶಃ ರಕ್ಷಣಾ ಕಡೆಯವರಿಗೆ ಗುತ್ತಿಗೆ ನೀಡಲಾಗಿದೆ. ಸಾರ್ವಜನಿಕ ಪ್ರವಾಸಿಗರ ದೋಣಿ ವಿಹಾರದ ಗುತ್ತಿಗೆಯನ್ನು ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದವರಿಗೆ ಕೊಡಲಾಗಿದೆ.